ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ
BENGALURU CENTRAL UNIVERSITY
BE BOUNDLESS

# ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ

ಸಂಖ್ಯೆ: ಬೆಂ.ಕೇ.ವಿ/398/2019–20 ದಿನಾಂಕ:12.09.2019

ರವರಿಗೆ,

ಸಂಯೋಜಿತ ಕಾಲೇಜುಗಳ ಎಲ್ಲಾ ಪ್ರಾಂಶುಪಾಲರು,
ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ,
ಬೆಂಗಳೂರು.

ಮಾನ್ಯರೆ,

ವಿಷಯ: **ದಿನಾಂಕ:12.09.2019 ರಂದು ಮಾನ್ಯ ಅಭಿವೃದ್ಧಿ ಆಯುಕ್ತರು ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಬೆಂಗಳೂರು ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡುವ ಕುರಿತಂತೆ ನೀಡಿರುವ ಸೂಚನೆಗಳನ್ನು ಕೂಡಲೇ ಪಾಲಿಸುವ ಕುರಿತು.**

ಉಲ್ಲೇಖ: ಸರ್ಕಾರದ ಸಭಾ ಸೂಚನ ಪತ್ರ ಸಂಖ್ಯೆ:ಇಡಿ 168 ಯುಬಿವಿ, 2019, ದಿನಾಂಕ:11.09.2019

******

ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ ತಮ್ಮ ಗಮನಕ್ಕೆ ತರಬಯಸುವುದೇನೆಂದರೆ, ದಿನಾಂಕ:12.09.2019 ರಂದು ಅಭಿವೃದ್ಧಿ ಆಯುಕ್ತರು ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಅಪರ ಮುಖ್ಯ ಕಾರ್ಯದರ್ಶಿ, ಇ–ಆಡಳಿತ, ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳ ಸಮ್ಮುಖದಲ್ಲಿ ಜರುಗಿದ ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಅನುಷ್ಠಾನಗೊಳಿಸುವ ಬಗ್ಗೆ ಸಲಹೆ–ಸೂಚನೆಗಳನ್ನು ನೀಡಿರುತ್ತಾರೆ.

- ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ವಿಶ್ವವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತ ಹಾಗೂ ವಿಕಲಚೇತನ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ವಿವಿಧ ಇಲಾಖೆಗಳ ಮೂಲಕ ನೀಡುತ್ತಿರುವ ವಿದ್ಯಾರ್ಥಿ ವೇತನವನ್ನು ಪಡೆಯಲು ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನದ ಪೋರ್ಟಲ್ (SSP) ಗಳನ್ನು ಪ್ರಾರಂಭಿಸಿದ್ದು, ಈ ಸಂಬಂಧ, ಪ್ರತಿಯೊಂದು ಕಾಲೇಜಿನವರು ಈ ಪೋರ್ಟಲ್ ನಲ್ಲಿ ಕೋರಿರುವ ಮಾಹಿತಿಯನ್ನು ತುಂಬಲು ಒಬ್ಬ ಮಾಹಿತಿ ತಂತ್ರಜ್ಞಾನ ಅಧಿಕಾರಿ (Technology Person) ಯನ್ನು ನೇಮಿಸಲು ಸೂಚಿಸಿರುತ್ತಾರೆ.

- ಪೋರ್ಟಲ್‌ನಲ್ಲಿ ತುಂಬಿರುವ ಮಾಹಿತಿಯು ಸರಿ ಇರುವ ಬಗ್ಗೆ Electronic Attestation ಮಾಡಲು ಒಬ್ಬ ಅಧಿಕಾರಿಯನ್ನು ನಾಮನಿರ್ದೇಶನ ಮಾಡಿ ಅವರ ಹೆಸರು, ಅವರ ಹುದ್ದೆ ಹಾಗೂ ಅವರ ಆಧಾರ್ ಸಂಖ್ಯೆ, ಮೊಬೈಲ್ ಸಂಖ್ಯೆಯನ್ನು ನೀಡಬೇಕು.

ಸೆಂಟ್ರಲ್ ಕಾಲೇಜು ಆವರಣ, ಡಾ. ಬಿ ಆರ್ ಅಂಬೇಡ್ಕರ್ ವೀಧಿ, ಬೆಂಗಳೂರು – 560001
ದೂರವಾಣಿ : 080–2213 1385 ಫ್ಯಾಕ್ಸ್ : 080–2213 1383 ಇ–ಮೇಲ್ : registrarbcu@gmail.com

❖ ಸದರಿ ಪೋರ್ಟಲ್‌ನ್ನು ಪೈಲಟ್ ಪ್ರಾಜೆಟ್ (Pilot Project) ಆಗಿ ದಿನಾಂಕ:13.09.2019 ಕ್ಕೆ ತೆರೆದು ದಿನಾಂಕ:15.09.2019 ರವರೆಗೆ ಚಾಲ್ತಿಯಲ್ಲಿದ್ದು, ಈ ಅವಧಿಯಲ್ಲಿ ಆಗುವಂತಹ ಲೋಪ ದೋಷಗಳನ್ನು ಸರಿಪಡಿಸಲು ಅವಕಾಶವಿರುತ್ತದೆ.

❖ ದಿನಾಂಕ:16.09.2019 ರಿಂದ 23.09.2019 ರೊಳಗಾಗಿ ಎಲ್ಲಾ ಕಾಲೇಜಿನವರು ಮಾಹಿತಿಯನ್ನು ಭರ್ತಿ ಮಾಡಿ ಆನ್‌ಲೈನ್ ಮೂಲಕ ಸಲ್ಲಿಸಲು ಗಡುವು ನೀಡಿರುತ್ತಾರೆ.

❖ ಸಕಾಲದಲ್ಲಿ ಈ ವಿಷಯದ ಬಗ್ಗೆ ಕ್ರಮ ಕೈಗೊಳ್ಳದೇ ಅರ್ಹ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತ ಹಾಗೂ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರಾಗದಿದ್ದಲ್ಲಿ, ಅದಕ್ಕೆ ಆಯಾ ಕಾಲೇಜು/ಶಿಕ್ಷಣ ಸಂಸ್ಥೆಗಳೇ ನೇರ ಹೊಣೆಗಾರಿಕೆಯಾಗುವುದರಿಂದ, ಈ ವಿಷಯದಲ್ಲಿ ಮಂಜೂರಾತಿ ನೀಡುವ ಇಲಾಖೆಗಳಾಗಲೀ ಅಥವಾ ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯವಾಗಲೀ ಜವಾಬ್ದಾರರಾಗುವುದಿಲ್ಲ.

❖ ಈ ವಿಷಯದಲ್ಲಿ ತಮಗೆ ಯಾವುದಾದರೂ ಗೊಂದಲಗಳಿದ್ದಲ್ಲಿ/ಸ್ಪಷ್ಟೀಕರಣ ಬೇಕಾಗಿದ್ದಲ್ಲಿ,

Dr. Bhagyawan S. Mudigoudra
Special Officer E-Governance & State Nodal Officer – AISHE
Department of Higher Education,
Government of Karnataka, M.S. building,
Bangalore – 560001
Ph: 080-22032741
Mob: 09480584366, 099880628877

ರವರನ್ನು ಸಂಪರ್ಕಿಸಲು ಸೂಚಿಸಿದೆ.

ಈ ವಿಷಯದಲ್ಲಿ ಉದಾಸೀನತೆ/ನಿರ್ಲಕ್ಷ್ಯತನಕ್ಕೆ ಅವಕಾಶವಿಲ್ಲದೇ ಇರುವುದರಿಂದ, ಆದ್ಯತೆಯ ಮೇರೆಗೆ ಪೋರ್ಟಲ್ ತೆರೆದು ಕ್ರಮ ವಹಿಸಲು ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನವನ್ನು ನೀಡಬೇಕೆಂದು ಸೂಚಿಸಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

12/9/19

ಕುಲಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 168 ಯುಎಸ್‌ಇ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 11-09-2019

*ಸಭಾ ಸೂಚನಾ ಪತ್ರ ಪತ್ರ*

ವಿಷಯ: ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ವಿಶ್ವವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡುತ್ತಿರುವ ಬಗ್ಗೆ.

*******

ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ವಿಶ್ವವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡುತ್ತಿರುವ ಬಗ್ಗೆ ಹಾಗೂ ಇನ್ನಿತರೆ ವಿಷಯಗಳ ಕುರಿತಂತೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ಮತ್ತು ಕೃಷಿ ಉತ್ಪನ್ನ ಆಯುಕ್ತರು ಇವರ ಅಧ್ಯಕ್ಷತೆಯಲ್ಲಿ ಮತ್ತು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಮತ್ತು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಇ-ಆಡಳಿತ ಇಲಾಖೆ ಇವರ ಸಮ್ಮುಖದಲ್ಲಿ ದಿನಾಂಕ:12-09-2019ರಂದು ಬೆಳಿಗ್ಗೆ 10.00 ಗಂಟೆಗೆ ಕೊಠಡಿ ಸಂ. 419, 4ನೇ ಮಹಡಿ, ವಿಕಾಸ ಸೌಧ, ಬೆಂಗಳೂರು ಇಲ್ಲಿ ಸಭೆಯನ್ನು ಆಯೋಜಿಸಲಾಗಿರುತ್ತದೆ.

ಸದರಿ ಸಭೆಗೆ ಕುಲಸಚಿವರು (ಆಡಳಿತ) ಇವರು ತಮ್ಮ ವಿಶ್ವವಿದ್ಯಾಲಯದ ಮಾಹಿತಿ ತಂತ್ರಜ್ಞಾನ ಅಧಿಕಾರಿಯೊಂದಿಗೆ ಅಗತ್ಯ ಮಾಹಿತಿ/ದಾಖಲೆಗಳೊಂದಿಗೆ ಕಡ್ಡಾಯವಾಗಿ **ಸಭೆಗೆ ಹಾಜರಾಗುವಂತೆ** ಕೋರಿದೆ.

(ಎನ್. ವೀರಬ್ರಹ್ಮಚಾರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-1).

**ಇವರಿಗೆ:**

1. ಎಲ್ಲಾ ಕುಲಸಚಿವರುಗಳು,
   ಕರ್ನಾಟಕ ರಾಜ್ಯ ಸಾರ್ವಜನಿಕ/ಖಾಸಗಿ/ಡೀಮ್ಡ್ ಟುಬಿ ವಿಶ್ವವಿದ್ಯಾನಿಲಯಗಳು, ಕರ್ನಾಟಕ ರಾಜ್ಯ.

....2

2. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಆಡಳಿತಾಧಿಕಾರಿಗಳು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.

ಪ್ರತಿಯನ್ನು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ಮತ್ತು ಕೃಷಿ ಉತ್ಪನ್ನ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಇ-ಆಡಳಿತ ಇಲಾಖೆ.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವೈದ್ಯಕೀಯ ಶಿಕ್ಷಣ ಇಲಾಖೆ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಕಾನೂನು ಇಲಾಖೆ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
8. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು
9. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು)
10. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಮತ್ತು ತಾಂತ್ರಿಕ)
11. ಸಮನ್ವಯಾಧಿಕಾರಿ, ಇ-ಆಡಳಿತ ಶಾಖೆ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
12. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಆಸುಇ (ಕಾರ್ಯಕಾರಿ) ಮೇಲ್ಕಂಡ ಸಭೆಗೆ ಕೊಠಡಿ ಸಂ. 419, 4ನೇ ಮಹಡಿ, ವಿಕಾಸ ಸೌಧ ಕಾಯ್ದಿರಿಸುವುದು.